# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 670 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಆರ್.ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಮುಖ್ಯಮಂತ್ರಿಗಳು |
| ಉತ್ತರಿಸಬೇಕಾದ ದಿನಾಂಕ | : | 12-03-2020 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕದಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ; ರಾಜ್ಯ ಸರ್ಕಾರವು ಸಣ್ಣ ಕೈಗಾರಿಕೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಿರುತ್ತದೆ. | ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ 22,834 ಸಣ್ಣ ಕೈಗಾರಿಕೆಗಳು ಸ್ಥಾಪನೆಗೊಂಡಿರುತ್ತವೆ.<br><br>ಕಳೆದ 3 ವರ್ಷಗಳಲ್ಲಿ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ಒಟ್ಟು 786 ನಿವೇಶನಗಳನ್ನು ಮತ್ತು 166 ಮಳಿಗೆಗಳನ್ನು ಹಂಚಿಕೆ ಮಾಡಲಾಗಿರುತ್ತದೆ. |

| ಕ್ರಮ ಸಂಖ್ಯೆ | ಆರ್ಥಿಕ ವರ್ಷ | ಮಳಿಗೆ | ನಿವೇಶನ |
|---|---|---|---|
| [1] | 2016-17 | 52 | 294 |
| [2] | 2017-18 | 54 | 136 |
| [3] | 2018-19 | 4 | 208 |
| [4] | 2019-20 (ಫೆಬ್ರವರಿ ವರೆಗೆ) | 56 | 148 |
| | ಒಟ್ಟು | 166 | 786 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಆ. | ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಮೂಲಕ ಕಳೆದ ಮೂರು ವರ್ಷಗಳಲ್ಲಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ; (ವಿವರ ನೀಡುವುದು) | ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಮೂಲಕ ಕಳೆದ ಮೂರು ವರ್ಷಗಳಲ್ಲಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ಹಂಚಿಕೆ ಮಾಡಿರುವ ನಿವೇಶನಗಳ ವಿವರ ಈ ಕೆಳಗಿನಂತಿದೆ: |

| ಅವಧಿ | ಶಿವಮೊಗ್ಗ | ಹೊನ್ನಾಳಿ (ದಾವಣಗೆರೆ ಜಿಲ್ಲೆ) | ಚನ್ನಗಿರಿ (ದಾವಣಗೆರೆ ಜಿಲ್ಲೆ) |
|---|---|---|---|
| 2017-18 | - | ದಾವಣಗೆರೆಯ ಹೊನ್ನಾಳಿ ಮತ್ತು ಚನ್ನಗಿರಿಯಲ್ಲಿ ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದಿಂದ ಕೈಗಾರಿಕಾ ವಸಹಾತುಗಳನ್ನು ನಿರ್ಮಿಸಿರುವುದಿಲ್ಲ. | |
| 2018-19 | 1 | | |
| 2019-20 | - | | |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಇ. | ಶಿವಮೊಗ್ಗ ಜಿಲ್ಲೆ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ಸಣ್ಣ ಕೈಗಾರಿಕಾ ಇಲಾಖೆ ಸಣ್ಣ ಕೈಗಾರಿಕೆ ಅಭಿವೃದ್ಧಿ ಯಾವುದಾದರೂ ಯೋಜ್ಞನೆಯನ್ನು ಕೈಗೊಂಡಿದೆಯೇ; ಇಲ್ಲದೇ ಹೋದಲ್ಲಿ ಯೋಜನೆಯನ್ನು ಕೈಗೊಳ್ಳುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; ಈಗಾಗಲೇ ಸ್ಥಾಪಿಸಲಾಗಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಸಹಾಯಧನ ನೀಡಲಾಗಿದೆಯೇ? (ವಿವರಗಳನ್ನು ನೀಡುವುದು) | ಸರ್ಕಾರವು ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆ ಒಳಗೊಂಡು ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಈ ಕೆಳಗಿನ ಯೋಜನೆಗಳನ್ನು ಹಮ್ಮಿಕೊಂಡಿರುತ್ತದೆ.<br><br>1. **ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ** ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಟ ಸಾಲ ರೂ. 25 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಟ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಮಹಿಳಾ ಉದ್ದಿಮೆದಾರರಿಗೆ ಶೇಕಡ 4 ರ ಬಡ್ಡಿ ದರದಲ್ಲಿ ರೂ.2.00 ಕೋಟಿಯವರೆಗೂ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ.<br><br>3. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ **10**ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ **50** ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಟ 2 ಎಕರೆ) ಮತ್ತು ಶೇ **90** ರಿಯಾಯಿತಿ ದರದಲ್ಲಿ ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ.<br><br>5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ 60 ರಷ್ಟು ಗರಿಷ್ಟ ರೂ.**5.00** ಲಕ್ಷ ಸಹಾಯಧನ ನೀಡಲಾಗುತ್ತಿದೆ.<br><br>6. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ **ಹೊಸ** ಘಟಕಗಳಿಗೆ ಗರಿಷ್ಟ ರೂ.**2.00** ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು **1/3** ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ **ಶೇ.50** ರಷ್ಟು ಬಡ್ಡಿ ರಹಿತ ಗರಿಷ್ಟ ರೂ.33 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br><br>7. ದಿನಾಂಕ:01–04–2017 ರಿಂದ ಮೊದಲ ಬಾರಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರು ಸ್ಥಾಪಿಸುವ ಸಣ್ಣ ಮತ್ತು ಅತೀ ಸಣ್ಣ ಘಟಕಗಳು ಸಾಲ ಪಡೆಯುವ ಸಂದರ್ಭದಲ್ಲಿ ಕೆಎಸ್.ಎಫ್.ಸಿ ಮತ್ತು ಇತರೇ ಹಣಕಾಸು ಸಂಸ್ಥೆಯವರು ವಿಧಿಸಿರುವ ಪರಿಷ್ಕರಣಾ ಶುಲ್ಕ, ಕಾನೂನು ಶುಲ್ಕ, ಏಕಕಾಲಿಕ ಸಾಲ ವಿತರಣಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ಭರಿಸಲಾಗುತ್ತಿದೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|

8. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ಯಮಗಳು ದಿನಾಂಕ: 01-04-2017 ರಿಂದ ಪ್ರಾರಂಭವಾಗಿರುವ ಹೊಸ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕಾ ಘಟಕಗಳಿಗೆ ಮೊದಲ 5 ವರ್ಷಗಳ ಅವಧಿಗೆ ಪ್ರತಿ ಯುನಿಟ್‌ಗೆ 2 ರೂ.ಗಳಷ್ಟು ವಿದ್ಯುಚ್ಛಕ್ತಿ ಸಹಾಯಧನ ನೀಡಲಾಗುತ್ತಿದೆ.

9. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2014-19 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ.

1. ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕ ರಿಯಾಯಿತಿ.
2. ಬಂಡವಾಳ ಹೂಡಿಕೆ ಸಹಾಯಧನ
3. ಬಡ್ಡಿ ಸಹಾಯಧನ
4. ಭೂ ಪರಿವರ್ತನಾ ಶುಲ್ಕ ಮರುಪಾವತಿ.
5. ಪ್ರವೇಶ ತೆರಿಗೆ ವಿನಾಯಿತಿ.
6 ರಫ್ತು ಆದಾರಿತ ಘಟಕಗಳಿಗೆ ರಿಯಾಯಿತಿ.
7. ಕೃಷಿ ಉತ್ಪನ್ನ ಮಾರುಕಟ್ಟೆ ತೆರಿಗೆಯಿಂದ ವಿನಾಯಿತಿ.
8. ತ್ಯಾಜ್ಯ ಸಂಸ್ಕರಣಾ ಯಂತ್ರ ಸ್ಥಾಪನೆಗೆ ಸಹಾಯಧನ.
9. ವಿದ್ಯುತ್ ತೆರಿಗೆ ವಿನಾಯಿತಿ
10. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಮತ್ತು ಪೇಟೆಂಟ್ ನೋಂದಣಿ ಸಹಾಯಧನ
11. ಮಳೆ ನೀರು ಕೊಯ್ಲು / ಸಂರಕ್ಷಣೆ ಸಹಾಯಧನ
12. ಶಕ್ತಿ ಸಂರಕ್ಷಣೆ ಸಹಾಯಧನ
13. ಯೋಜನಾ ವರದಿ ವೆಚ್ಚ ಮರುಪಾವತಿ

**2019-20** ನೇ ಸಾಲಿನಲ್ಲಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲ್ಲೂಕು ಮತ್ತು ಚನ್ನಗಿರಿ ತಾಲ್ಲೂಕುಗಳಿಗೆ ಬಿಡುಗಡೆ ಮಾಡಲಾದ ಸಹಾಯಧನದ ವಿವರಗಳು ಈ ಕೆಳಗಿನಂತಿವೆ:

| | ಸಹಾಯಧನ ಮಂಜೂರಾತಿ | | ಸಹಾಯಧನ ಬಿಡುಗಡೆ | | ಬಿಡುಗಡೆಗೆ ಬಾಕಿ ಇರುವ ಸಹಾಯಧನ | |
|---|---|---|---|---|---|---|
| ಜಿಲ್ಲೆ | ಘಟಕಗಳು | ಸಹಾಯಧನ ರೂ.ಗಳಲ್ಲಿ | ಘಟಕಗಳು | ಸಹಾಯಧನ ರೂ.ಗಳಲ್ಲಿ | ಘಟಕಗಳು | ಸಹಾಯಧನ ರೂ.ಗಳಲ್ಲಿ |
| ಶಿವಮೊಗ್ಗ | 48 | 5,95,01,700 | 41 | 5,64,02,900 | 7 | 30,98,800 |
| ಹೊನ್ನಾಳಿ | 1 | 4,80,000 | 1 | 4,80,000 | – | – |
| ಚನ್ನಗಿರಿ | 3 | 31,19,000 | 3 | 31,19,000 | – | – |

**ಸಿಐ 22 ಸಪ್ರಕೈ 2020**

ಬಿ.ಎಸ್.ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ